ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

10 ಸ್ವಾಸ್ಥ್ಯ-19

ಇಲಾಖೆ / ವಿಷಯ : DEPARTMENT / SUBJECT: ಸುದ್ದಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 22/3/21

# ಕೋವಿಡ್: ಮುಖ್ಯಮಂತ್ರಿಗೆ ಆರೋಗ್ಯ ಸಚಿವರ ಮನವಿ
# 'ಸರ್ವಪಕ್ಷಗಳ ಸಭೆ ಅಗತ್ಯ'

ಪ್ರಜಾವಾಣಿ ವಾರ್ತೆ 21-3-21

**ಬೆಂಗಳೂರು:** ಕೋವಿಡ್ ಪ್ರಕರಣಗಳು ಹೆಚ್ಚಾಗುತ್ತಿರುವುದರಿಂದ ಅದರ ನಿಯಂತ್ರಣಕ್ಕೆ ಸಲಹೆ ಪಡೆಯಲು ಸರ್ವಪಕ್ಷಗಳ ಸಭೆ ಕರೆಯುವುದು ಅಗತ್ಯವಿದೆ. ಈ ಸಂಬಂಧ ಮುಖ್ಯಮಂತ್ರಿಗೆ ಮನವಿ ಮಾಡುತ್ತೇನೆ ಎಂದು ಆರೋಗ್ಯ ಸಚಿವ ಡಾ.ಕೆ. ಸುಧಾಕರ್ ತಿಳಿಸಿದರು.



ಭಾನುವಾರ ಸುದ್ದಿಗಾರರ ಜತೆ ಮಾತನಾಡಿದ ಅವರು, ಒಂದು ವೇಳೆ ಸರ್ಕಾರದ ಪ್ರಯತ್ನದ ನಡುವೆಯೂ ಪ್ರಕರಣಗಳ ಸಂಖ್ಯೆ ಹೆಚ್ಚಾದರೆ, ಸರ್ಕಾರ ವಿಫಲವಾಗಿದೆ ಎಂದು ಟೀಕಿಸುತ್ತಾರೆ ಎಂದು ಹೇಳಿದರು.

ಕೋವಿಡ್ ಪ್ರಕರಣಗಳು ಹೆಚ್ಚಾಗುತ್ತಿರುವುದರಿಂದ ಶಾಲಾ-ಕಾಲೇಜುಗಳಿಗೆ ರಜೆ ನೀಡಲಾಗುವುದೇ ಎಂಬ ಪ್ರಶ್ನೆಗೆ, ಈಗಾಗಲೇ ಶಾಲಾ-ಕಾಲೇಜುಗಳ ತರಗತಿಗಳು ಆರಂಭವಾಗಿವೆ. ವಿದ್ಯಾರ್ಥಿಗಳ ಯೋಗಕ್ಷೇಮವೂ ಮುಖ್ಯ. ಇದೊಂದು ಸೂಕ್ಷ್ಮ ವಿಷಯ ಆಗಿರುವುದರಿಂದ ಈ ಬಗ್ಗೆ ಮುಖ್ಯಮಂತ್ರಿ ಜತೆ ಚರ್ಚಿಸಲಾಗುವುದು ಎಂದರು.

ಕೋವಿಡ್ ಸೋಂಕಿತರ ಸಂಖ್ಯೆ ಪುನಃ ಹೆಚ್ಚಾಗುತ್ತಿದ್ದು, ಸಾರ್ವಜನಿಕರು ಸರ್ಕಾರದ ಮಾರ್ಗಸೂಚಿಯ ಪ್ರಕಾರ ನಡೆದುಕೊಳ್ಳದಿದ್ದರೆ ಅಪಾಯ ಕಟ್ಟಿಟ್ಟ ಬುತ್ತಿ. ಬೆಂಗಳೂರಿನಲ್ಲಿ ಸೋಂಕಿತರ ಸಂಖ್ಯೆ ಸಾವಿರ ದಾಟಿದೆ. ಶನಿವಾರ ಒಂದೇ ದಿನ ಏಳು ಜನ ಮೃತಪಟ್ಟಿದ್ದಾರೆ. ಪ್ರಕರಣಗಳು ಹೆಚ್ಚಾಗುತ್ತಿರುವುದನ್ನು ಒಪ್ಪಿಕೊಳ್ಳಲೇಬೇಕು. ಸರ್ಕಾರ ಲಸಿಕೆ ನೀಡುತ್ತಿದೆ. ಆದರೆ, ಸಾರ್ವಜನಿಕರೂ ಕೂಡಾ ಜವಾಬ್ದಾರಿಯಿಂದ ವರ್ತಿಸಬೇಕು. ಸೋಂಕು ಹೆಚ್ಚುತ್ತಾ ಹೋದರೆ ಸರ್ಕಾರವೂ ಏನು ಮಾಡಲು ಸಾಧ್ಯವಿಲ್ಲ ಎಂದು ಹೇಳಿದರು.

ಗಡಿ ಭಾಗದಿಂದ ಬರುವವರು ನೆಗೆಟಿವ್ ಪ್ರಮಾಣಪತ್ರ ತರಬೇಕು. ಆಗ ಮಾತ್ರ ಅನುಮತಿ ನೀಡಲಾಗುವುದು ಎಂದು ಸುಧಾಕರ್ ಹೇಳಿದರು.

## ಒಂದೇ ದಿನ 43,846 ಪ್ರಕರಣಗಳು

**ನವದೆಹಲಿ (ಪಿಟಿಐ):** ದೇಶದಲ್ಲಿ ಭಾನುವಾರ ಬೆಳಿಗ್ಗೆ 8 ಗಂಟೆಗೆ ಕೊನೆಗೊಂಡ 24 ಗಂಟೆಗಳಲ್ಲಿ 43,846 ಕೋವಿಡ್-19 ಪ್ರಕರಣಗಳು ದೃಢವಾಗಿದ್ದು, 188 ಜನರು ಮೃತಪಟ್ಟಿದ್ದಾರೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಮಾಹಿತಿ ನೀಡಿದೆ. ದೇಶದಲ್ಲಿ ಈ ವರ್ಷ ಒಂದೇ ದಿನ ದಾಖಲಾದ ಅತ್ಯಧಿಕ ಪ್ರಕರಣ ಇದು. ಮಹಾರಾಷ್ಟ್ರ, ಕೇರಳ, ಪಂಜಾಬ್, ಕರ್ನಾಟಕ, ಗುಜರಾತ್ ಮತ್ತು ಮಧ್ಯಪ್ರದೇಶಗಳಲ್ಲಿ ಹೊಸ ಸೋಂಕು ಪ್ರಕರಣಗಳು ಶೇ 83.14 ರಷ್ಟಿವೆ.

ರಾಜಸ್ಥಾನದಲ್ಲಿ ಕೋವಿಡ್-19 ಪ್ರಕರಣಗಳು ಹೆಚ್ಚುತ್ತಿರುವ ಕಾರಣ ಜೈಪುರ, ಅಜ್ಮೀರ್, ಕೋಟಾ, ಉದಯಪುರ ಸೇರಿದಂತೆ ಎಂಟು ನಗರಗಳಲ್ಲಿ ಸೋಮವಾರದಿಂದ ರಾತ್ರಿ ಕರ್ಫ್ಯೂ ಜಾರಿಗೊಳಿಸಿ ರಾಜಸ್ಥಾನ ಸರ್ಕಾರ ಆದೇಶಿಸಿದೆ.

## ಸ್ಪೀಕರ್ ಓಂ ಬಿರ್ಲಾಗೆ ಕೋವಿಡ್

**ನವದೆಹಲಿ:** ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಅವರಿಗೆ ಕೋವಿಡ್ ಇರುವುದು ದೃಢಪಟ್ಟಿದ್ದು, ಅವರನ್ನು ಏಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. 'ಓಂ ಬಿರ್ಲಾ ಅವರ ಆರೋಗ್ಯದ ಮೇಲೆ ನಿಗಾ ಇಡಲಾಗಿದೆ. ಸದ್ಯ ಅವರ ಆರೋಗ್ಯ ಸ್ಥಿರವಾಗಿದೆ' ಎಂದು ಏಮ್ಸ್ ಆಸ್ಪತ್ರೆ ಭಾನುವಾರ ಹೇಳಿಕೆ ಬಿಡುಗಡೆ ಮಾಡಿದೆ.